**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ,</u>**

**<u>ದೊಡ್ಡಬಳ್ಳಾಪುರ</u>**

**ಸಿ ಸಿ ನಂ : 110/2016**

**ಪಿ ಡಬ್ಲ್ಯೂ - 7**

**ಸಿ ಡಬ್ಲ್ಯೂ - 6**

**ದಿಃ 10.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಮಂಜುನಾಥ್**

**ತಂದೆಯ ಹೆಸರು ಃ ನಾರಾಯಣಪ್ಪ**

**ವಯಸ್ಸು ಃ 40 ವರ್ಷ**

**ಉದ್ಯೋಗ ಃ ಸರ್ವೇ ಇಲಾಖೆ**

**ವಿಳಾಸ ಃ ತರಬನಹಳ್ಳಿ ಗ್ರಾಮ, ದೊಡ್ಡಬಳ್ಳಾಪುರ ತಾಲ್ಲೂಕು**

**<u>ಮುಖ್ಯ ವಿಚಾರಣೆ ಃ</u> ಸ ಸ ಅ ರವರಿಂದ**

ಸಾಕ್ಷಿಯು ನಿಪಿ-2 ಪಂಚನಾಮೆಯಲ್ಲಿನ ತಮ್ಮ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-2 ಕ್ಕೆ ಸಹಿಯನ್ನು ಎಲ್ಲಿ ಮತ್ತು ಯಾವಾಗ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನಿಪಿ-2 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲುಃ</u> ಸ ಸ ಅ ರವರಿಂದ**

ದಿಃ 27.09.2015 ರಂದು ಪೊಲೀಸರು ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ಚಾಸಾ-1 ರವರು ತೋರಿಸಿದ ಘಟನಾ ಸ್ಥಳದ ಪಂಚನಾಮೆಯನ್ನು ಸಂಜೆ 4-45 ರಿಂದ 5-45 ಗಂಟೆಯವರೆಗೆ ಮಾಡಿ ನಿಪಿ-2 ಪಂಚನಾಮೆಯನ್ನು ಬರೆದು ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ಅದೇ ಸಮಯದಲ್ಲಿ ಸೈಕಲ್ ಹಾಗೂ ಕೆಎ-19-ಬಿ-9729 ಲಾರಿಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಲ್ಲಿನ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಕಂಪ್ಯೂಟರನಲ್ಲಿ ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**

**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**